ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY, RESEARCH AND REFERENCE BRANCH
ಪತ್ರಿಕಾ ತುಣುಕುಗಳು
PAPER CLIPPINGS
ಶಾಖೆ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE 30/1/21

# ಬಿಎಸಿಗೆ ಕಾಂಗ್ರೆಸ್ ಗೈರು: ಸಭೆ ಮುಂದೂಡಿಕೆ

ಪ್ರಜಾವಾಣಿ ವಾರ್ತೆ 30-1-21

ಬೆಂಗಳೂರು: ವಿಧಾನಸಭಾ ಕಲಾಪ ಸಲಹಾ ಸಮಿತಿ ಸಭೆಗೆ (ಬಿಎಸಿ) ಕಾಂಗ್ರೆಸ್ ಬಹಿಷ್ಕಾರ ಹಾಕಿದ ಕಾರಣ ಸಮಿತಿ ಸಭೆಯನ್ನು ಸೋಮವಾರಕ್ಕೆ ಮುಂದೂಡಲಾಗಿದೆ.

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಗೃಹ ಮತ್ತು ಕಾನೂನು ಸಚಿವ ಬಸವರಾಜ ಬೊಮ್ಮಾಯಿ ಅವರು ವಿರೋಧ ಪಕ್ಷದ ನಾಯಕ ಸಿದ್ದರಾಮಯ್ಯ ಅವರ ಮನವೊಲಿಸುವ ಯತ್ನ ಮಾಡಿದರು. ಆದರೆ, ಸಿದ್ದರಾಮಯ್ಯ ಬಗ್ಗಲಿಲ್ಲ ಎನ್ನಲಾಗಿದೆ.

ಕಲಾಪ ಸಲಹಾ ಸಮಿತಿ ಸಭೆ ಬಹಿ-



ಸಿದ್ದರಾಮಯ್ಯ

ಷ್ಕರಿಸುವುದಾಗಿ ಗುರುವಾರ ನಡೆದ ಶಾಸಕಾಂಗ ಪಕ್ಷದ ಸಭೆಯಲ್ಲಿ ಕಾಂಗ್ರೆಸ್ ನಾಯಕರು ತೀರ್ಮಾನ ತೆಗೆದುಕೊಂಡಿದ್ದರು.

ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಶುಕ್ರವಾರ ಬೆಳಿಗ್ಗೆ ಬಿಎಸಿ ಸಭೆ ಕರೆದಿದ್ದರು.

ಕಾಂಗ್ರೆಸ್ ನಾಯಕರು ಸಭೆಗೆ ಹಾಜರಾಗದಿದ್ದಾಗ ಖುದ್ದು ಯಡಿಯೂರಪ್ಪ ಅವರು ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಸಮಾಧಾನಗೊಳಿಸುವ ಪ್ರಯತ್ನಕ್ಕೆ ಕೈ ಹಾಕಿದರು. 'ಯಾವುದೇ ಸಮಸ್ಯೆ, ಅಸಮಾಧಾನ ಇದ್ದರೂ ಅದನ್ನು ಮಾತುಕತೆಯ ಮೂಲಕ ಬಗೆಹರಿಸಿಕೊಳ್ಳೋಣ. ಬಹಿಷ್ಕಾರದ ತೀರ್ಮಾನವನ್ನು ಹಿಂದಕ್ಕೆ ಪಡೆಯಿರಿ' ಎಂದು ಮನವೊಲಿಸುವ ಯತ್ನ ಮಾಡಿದರು.

'ಕಲಾಪ ಸಲಹಾ ಸಮಿತಿ ಸಭೆಯಲ್ಲಿ ವಿರೋಧ ಪಕ್ಷಗಳು ಹಾಜರಾಗದಿದ್ದರೆ ಸಭೆಯು ಅರ್ಥಪೂರ್ಣ ಎನಿಸುವುದಿಲ್ಲ. ಆದ್ದರಿಂದ, ಸಭೆಯಲ್ಲಿ ಭಾಗವಹಿಸಬೇಕು. ಹಿಂದೆ ಎಂದೂ ವಿರೋಧ ಪಕ್ಷಗಳು ಕಲಾಪ ಸಲಹಾ ಸಮಿತಿ ಸಭೆಯನ್ನು ಬಹಿಷ್ಕರಿಸಿದ ನಿದರ್ಶನಗಳಿಲ್ಲ' ಎಂದೂ ಯಡಿಯೂರಪ್ಪ ತಿಳಿಸಿದರು.

ಸಿದ್ದರಾಮಯ್ಯ ಅವರ ಜತೆ ಪ್ರತ್ಯೇಕವಾಗಿ ಮಾತನಾಡಿದ ಕಾನೂನು ಮತ್ತು ಸಂಸದೀಯ ಸಚಿವ ಬಸವರಾಜ ಬೊಮ್ಮಾಯಿ ಅವರನ್ನು ಸಮಾಧಾನಪಡಿಸಿ, ನಿರ್ಧಾರದಿಂದ ಹಿಂದೆ ಸರಿಯುವಂತೆ ಮನವೊಲಿಸುವ ಪ್ರಯತ್ನ ಮಾಡಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಿದ್ದರಾಮಯ್ಯ, 'ಬಿಎಸಿ ಸಭೆಗೆ ನಾವು ಸುಮ್ಮನೆ ಬಹಿಷ್ಕಾರ ಹಾಕಿಲ್ಲ. ಕಳೆದ ಅಧಿವೇಶನದ ಸಂದರ್ಭದಲ್ಲಿ ಸಲಹಾ ಸಮಿತಿ ಸಭೆಯಲ್ಲಿ ಚರ್ಚೆ ಆಗದ ಮಸೂದೆಯನ್ನು ಮಂಡಿಸಲಾಯಿತು. ಆ ಕುರಿತು ಮುಂಚಿತವಾಗಿ ಸಣ್ಣ ಸುಳಿವೂ ಕೊಡಲಿಲ್ಲ' ಎಂದು ಆಕ್ರೋಶ ವ್ಯಕ್ತಪಡಿಸಿದರು.

'ಬಿಎಸಿ ಸಭೆಯಲ್ಲಿ ಚರ್ಚೆ ಆದ ಪ್ರಕಾರ ಸರ್ಕಾರ ನಡೆದುಕೊಳ್ಳದಿದ್ದರೆ ನಾವು ಬಂದು ಕುಳಿತು ಹೋದರೆ ಏನು ಪ್ರಯೋಜನ. ಇನ್ನು ಮುಂದೆ ಬಿಎಸಿ ಸಭೆಗಳಲ್ಲಿ ಭಾಗವಹಿಸಬಾರದು ಎಂದು ತೀರ್ಮಾನಿಸಿದ್ದೇವೆ'

ಎಂದು ಸಿದ್ದರಾಮಯ್ಯ ಸರ್ಕಾರಕ್ಕೆ ಹೇಳಿದರು.

ಸಿದ್ದರಾಮಯ್ಯ ಅವರ ಜತೆ ಮತ್ತೊಂದು ಸುತ್ತಿನ ಮಾತುಕತೆ ನಡೆಸಿ ಅವರ ಮನವೊಲಿಸಲು ವಿಧಾನಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ ಕಾಗೇರಿ ಹಾಗೂ ಸಚಿವ ಬೊಮ್ಮಾಯಿ ತೀರ್ಮಾನಿಸಿದ್ದಾರೆ. ಈ ಕಾರಣ ಕಲಾಪ ಸಲಹಾ ಸಮಿತಿ ಸಭೆಯನ್ನು ಸೋಮವಾರಕ್ಕೆ ಮುಂದೂಡಲಾಗಿದೆ ಎಂದು ಮೂಲಗಳು ಹೇಳಿವೆ.